**ಓ.ಎಸ್. ನಂಃ 142/2025**

**ಪಿ.ಡಬ್ಲ್ಯೂಃ 1**

**ದಿನಾಂಕ 27-10-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ.ಎಲ್.ವಿ.ಆರ್. ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ.1 ಎಂದು, ದಿನಾಂಕ 06.08.1967 ರ ನೊಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ನಿಪಿ.2 ಎಂದು, ದಿನಾಂಕ 22.02.1971 ರ ನೊಂದಾಯಿತ ಕ್ರಯ ಪತ್ರದ ಅಸಲು ಪ್ರತಿಯನ್ನು ನಿಪಿ.3 ಎಂದು ಮತ್ತು ಸದರಿ ಕ್ರಯ ಪತ್ರದ ದೃಢೀಕೃತ ನಕಲನ್ನು ನಿಪಿ.4 ಎಂದು, ದಿನಾಂಕ 15.03.1975 ರ ನೊಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ನಿಪಿ.5 ಎಂದು, ಋಣಭಾರ ಪ್ರಮಾಣ ಪತ್ರವನ್ನು ನಿಪಿ.6 ಮತ್ತು 7 ಎಂದು, ಪಹಣಿಯನ್ನು ನಿಪಿ.8 ಎಂದು ಗುರುತಿಸಲಾಯಿತು.

**ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲಿಗೆ ಮುಂಡೂಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**